**ಕರ್ನಾಟಕ ಸರ್ಕಾರ**

ಸಂಖ್ಯೆ:ಆಕುಕ 101 ಆರ್‌ಜಿಯು 2012 (ಭಾಗ)

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಕಾಸ ಸೌಧ,
ಬೆಂಗಳೂರು, ದಿನಾಂಕ 01.08.2012

**ಸುತ್ತೋಲೆ**

ರಾಜ್ಯದಲ್ಲಿ ವೈದ್ಯಕೀಯ / ದಂತ ವೈದ್ಯಕೀಯ ಕೋರ್ಸುಗಳಿಗೆ 2012-13 ನೇ ಸಾಲಿನ ಪ್ರವೇಶಾತಿ ಪ್ರಕ್ರಿಯೆಯು ಪ್ರಾರಂಭಗೊಂಡಿದ್ದು, ಈ ಕೋರ್ಸುಗಳ ಪ್ರವೇಶಾತಿಗೆ ಸಂಬಂಧಿಸಿದಂತೆ ಸರ್ಕಾರದ ಆದೇಶ ಸಂಖ್ಯೆ:ಆಕುಕ 101 ಆರ್‌ಜಿಯು 2012 ದಿನಾಂಕ 10.05.2012 ರಲ್ಲಿ ಸರ್ಕಾರವು ಈಗಾಗಲೇ ಶುಲ್ಕವನ್ನು ನಿಗದಿಪಡಿಸಿ ಆದೇಶಿಸಿದೆ.

ಆದರೆ, ಕೆಲವೊಂದು ವೈದ್ಯಕೀಯ / ದಂತ ವೈದ್ಯಕೀಯ ಕಾಲೇಜುಗಳಲ್ಲಿ ಎಂಬಿಬಿಎಸ್ / ಬಿಡಿಎಸ್ ಕೋರ್ಸಿಗೆ ಪ್ರವೇಶ ಪಡೆಯುತ್ತಿರುವ ವಿದ್ಯಾರ್ಥಿಗಳಿಂದ ಕಾಲೇಜುಗಳ ಆಡಳಿತ ಮಂಡಳಿಯವರು ಸರ್ಕಾರವು ನಿಗದಿಪಡಿಸಿರುವ ಶುಲ್ಕಕ್ಕಿಂತಲೂ ಅಧಿಕ ಶುಲ್ಕವನ್ನು ವಸೂಲಿ ಮಾಡುತ್ತಿರುವ ಬಗ್ಗೆ ಸರ್ಕಾರಕ್ಕೆ ದೂರುಗಳು ಬರುತ್ತಿದ್ದು, ಇದನ್ನು ಸರ್ಕಾರವು ಗಂಭೀರವಾಗಿ ಪರಿಗಣಿಸಿದೆ.

ಆದ್ದರಿಂದ, ವೈದ್ಯಕೀಯ / ದಂತ ವೈದ್ಯಕೀಯ ಕಾಲೇಜುಗಳಲ್ಲಿ ಎಂಬಿಬಿಎಸ್ / ಬಿಡಿಎಸ್ ಕೋರ್ಸುಗಳಿಗೆ ಪ್ರವೇಶ ಪಡೆಯುತ್ತಿರುವ ವಿದ್ಯಾರ್ಥಿಗಳಿಂದ ಕಾಲೇಜುಗಳ ಆಡಳಿತ ಮಂಡಳಿಯವರು ಸರ್ಕಾರವು ನಿಗದಿಪಡಿಸಿರುವ ಪ್ರವೇಶ ಶುಲ್ಕವನ್ನು ಮಾತ್ರ ಪಡೆಯುವಂತೆ ಈ ಮೂಲಕ ತಿಳಿಯಪಡಿಸಿದೆ. ಒಂದು ವೇಳೆ, ಸರ್ಕಾರದ ಆದೇಶವನ್ನು ಉಲ್ಲಂಘಿಸಿ ಅಧಿಕ ಶುಲ್ಕವನ್ನು ವಸೂಲಿ ಮಾಡಿದಲ್ಲಿ ಅಂತಹ ಕಾಲೇಜುಗಳ ವಿರುದ್ಧ ಸರ್ಕಾರವು ಕಠಿಣ ಕ್ರಮಗಳನ್ನು ಕೈಗೊಳ್ಳುವುದೆಂದು ಈ ಮೂಲಕ ಎಚ್ಚರಿಕೆ ನೀಡಿದೆ.

Mahaboob Khan
(ಮಹಬೂಬ್ ಖಾನ್)
ಸರ್ಕಾರದ ಅಧೀನ ಕಾರ್ಯದರ್ಶಿ-2,
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ
(ವೈದ್ಯಕೀಯ ಶಿಕ್ಷಣ)

01.08.12

ಇವರಿಗೆ:

1. ಕುಲಸಚಿವರು, ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ, ಜಯನಗರ 4 ನೇ ಟಿ ಬ್ಲಾಕ್, ಬೆಂಗಳೂರು-560026.
2. ನಿರ್ದೇಶಕರು, ವೈದ್ಯಕೀಯ ಶಿಕ್ಷಣ ನಿರ್ದೇಶನಾಲಯ, ಆನಂದರಾವ್ ವೃತ್ತ, ಬೆಂಗಳೂರು - 560009.
3. ಕಾರ್ಯಕಾರಿ ನಿರ್ದೇಶಕರು, ಕರ್ನಾಟಕ ಪರೀಕ್ಷಾ ಪ್ರಾಧಿಕಾರ, 18 ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು - (ಈ ಸುತ್ತೋಲೆಯನ್ನು ಕೂಡಲೇ web-site ನಲ್ಲಿ upload ಮಾಡುವಂತೆ ಸೂಚಿಸಿದೆ).
4. ರಾಜ್ಯದ ಎಲ್ಲಾ ಖಾಸಗಿ / ಡೀಮ್ಡ್ ವಿಶ್ವವಿದ್ಯಾಲಯಗಳ ವೈದ್ಯಕೀಯ / ದಂತ ವೈದ್ಯಕೀಯ ಕಾಲೇಜುಗಳ ಪ್ರಾಂಶುಪಾಲರುಗಳಿಗೆ - ವೈದ್ಯಕೀಯ ಶಿಕ್ಷಣ ನಿರ್ದೇಶಕರ ಮುಖಾಂತರ.
5. ಸದಸ್ಯರು, ಏಕ ಸದಸ್ಯ ಸಮಿತಿ, ಬೆಂಗಳೂರು.
6. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.

8/8/12

ಬೆಂಗಳೂರು-12.